# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 604 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 11.12.2023 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಪಡಿತರ ಅಕ್ಕಿ ಕಳ್ಳಸಾಗಾಣೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುವ ಪಡಿತರ ಅಕ್ರಮ ಸಾಗಾಣಿಕೆ ಕಂಡು ಬಂದಲ್ಲಿ ಕೂಡಲೇ ದಾಳಿ ನಡೆಸಿ, ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ, ಅಕ್ರಮ ಪಡಿತರ ದಾಸ್ತಾನು ಮುಟ್ಟುಗೋಲು ಹಾಕಿಕೊಂಡು, ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಮುಟ್ಟುಗೋಲು ದಾಸ್ತಾನನ್ನು ವಿಲೇ ಮಾಡಿ, ವಿಲೇ ಪಡಿಸಿದ ಪಡಿತರ ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡಲಾಗುತ್ತಿದೆ.<br><br>ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರೆಂದು ಕಂಡುಬಂದ ವ್ಯಕ್ತಿಗಳ ವಿರುದ್ಧ ಹಾಗೂ ಈ ಘಟನೆಗಳಿಗೆ ಕಾರಣಕರ್ತರಾದ ಅಧಿಕಾರಿ/ನೌಕರರ ವಿರುದ್ಧ ಸಂಬಂಧಪಟ್ಟ ಪೋಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಿ ಆಪಾದನೆಗಳ ಬಗ್ಗೆ ದೋಷಾರೋಪಣೆ ಪಟ್ಟಿಯನ್ನು ಸಂಬಂಧಿಸಿದ ನ್ಯಾಯಾಲಯಗಳಲ್ಲಿ ದಾಖಲಿಸಲಾಗುತ್ತಿದ್ದು, ಕಾನೂನುರೀತ್ಯ ಕ್ರಮ ಜರುಗಿಸಲಾಗುತ್ತಿದೆ. |
| ಆ | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮಗಳೇನು; | |
| ಇ | ಕಳ್ಳ ಸಾಗಣೆ ಬಗ್ಗೆ ಸರ್ಕಾರದ ಬಳಿ ಇರುವ ಅಂಕಿ ಅಂಶಗಳನ್ನು ಒದಗಿಸುವುದು? | ಏಪ್ರಿಲ್-2023 ರಿಂದ ನವೆಂಬರ್-2023 ರ ಅಂತ್ಯದವರೆಗೂ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪಡಿತರ ಆಹಾರಧಾನ್ಯ ಕಳ್ಳಸಾಗಾಣಿಕೆಯ ಒಟ್ಟು 251 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಈ ಪೈಕಿ 232 ಪ್ರಕರಣಗಳಲ್ಲಿ ಎಫ್.ಐ.ಆರ್ ದಾಖಲಿಸಿದ್ದು, ಒಟ್ಟು ರೂ. 31,32,08,215/- ಗಳ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡು, ಈ ಪ್ರಕರಣಗಳಲ್ಲಿ ಒಟ್ಟು 385 ಆರೋಪಿಗಳನ್ನು ಬಂಧಿಸಿ, 167 ವಾಹನಗಳನ್ನು ವಶಪಡಿಸಿ ಕೊಳ್ಳಲಾಗಿರುತ್ತದೆ. |

ಸಂಖ್ಯೆ: ಆನಾಸ 155 ಆರ್‌ಪಿಆರ್ 2023

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು